**ಕರ್ನಾಟಕ ವಿಧಾನ ಪರಿಷತ್‌ನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ**

**ಪ್ರಸ್ತಾಪ:**

2022ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರಾಜ್ಯದಲ್ಲಿ 1730 ಇಂಜಿನಿಯರಿಂಗ್ ಸೀಟುಗಳಿದ್ದು, ಕೆಇಎ ಮುಖಾಂತರ 2142 ಸೀಟುಗಳು (ಶೇಕಡ 60-70%) ಮಾತ್ರ ಭರ್ತಿ ಆಗಿದ್ದು, 1588 ಸೀಟುಗಳು (ಶೇಕಡ 30%) ಉಳಿಕೆ ಆಗಿರುತ್ತದೆ. ಉಳಿದ ಸೀಟುಗಳನ್ನು ಕಾಲೇಜು ಹಂತದಲ್ಲಿ ನಿಯಮಾನುಸಾರ ಭರ್ತಿ ಮಾಡಲು ಅವಕಾಶ ನೀಡದೆ ಇರುವುದರಿಂದ ಅರ್ಹ ಸ್ಥಳೀಯ ಅಭ್ಯರ್ಥಿಗಳು ಅವಕಾಶ ವಂಚಿತರಾಗಿದ್ದಾರೆ. ಆದರೆ ಖಾಸಗಿ ಕಾಲೇಜುಗಳಲ್ಲಿ ಕೆಇಎ ಕೌನ್ಸಿಲಿಂಗ್ ಸೀಟು ಹಂಚಿಕೆಯಾದ ನಂತರ ಉಳಿದ ಸೀಟುಗಳನ್ನು ಕಾಲೇಜು ಹಂತದಲ್ಲಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಸಗಿ ಕಾಲೇಜುಗಳಿಗೆ ನೀಡಿದ ಮಾದರಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿಯೂ ಕಾಲೇಜು ಹಂತದಲ್ಲಿ ಭರ್ತಿ ಮಾಡಕೊಳ್ಳಲು ಅವಕಾಶ ಕಲ್ಪಿಸುವಂತೆ ಕೋರಿರುವ ಬಗ್ಗೆ.

**ಹೇಳಿಕೆ:**

2022-23ನೇ ಸಾಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಪ್ರಥಮ ಬಿ.ಇ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಾತಿ ಪ್ರಕ್ರಿಯೆ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಎಲ್ಲಾ ಸುತ್ತುಗಳ ಸೀಟು ಹಂಚಿಕೆಯಾದ ನಂತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಭರ್ತಿ ಆಗದೇ ಖಾಲಿ ಉಳಿಯುವ ಸೀಟುಗಳಿಗೆ ನಿಯಮಾನುಸಾರ ರೋಷ್ಟರ್‌ಗನುಗುಣವಾಗಿ ಮೆರಿಟ್ ಆಧಾರದ ಮೇಲೆ ಆಯಾ ಸಂಸ್ಥೆಗಳ ಪ್ರಾಂಶುಪಾಲರ ಹಂತದಲ್ಲಿ ಸೀಟು ಹಂಚಿಕೆ ಮಾಡಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಈ ಕುರಿತು ನಿಯಮಾನುಸಾರ ಪರಿಶೀಲಿಸಲಾಗುವುದು.

**ಇಡಿ 357 ಟಿಇಸಿ 2022**

**(ಡಾ|| ಅಶ್ವತನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು